# ಉತ್ತಮ ಸಮಾಜ ನಿರ್ಮಿಸುವ ಮನಸುಗಳು ಹೆಚ್ಚಬೇಕಿದೆ :ಬಸವರಾಜ ಹೊರಟ್ಟಿ

ಉದಯಕಾಲ ನ್ಯೂಸ್



**ಹುಬ್ಬಳ್ಳಿ:** ಜನರ ಮನಸ್ಸಿನಲ್ಲಿ ಸ್ವಾರ್ಥ ಹೆಚ್ಚುತ್ತಿದ್ದು, ಸಾಮಾಜಿಕ ಕಳಕಳಿ ಕುಸಿಯುತ್ತಿದ್ದು, ಉತ್ತಮ ಸಮಾಜ ನಿರ್ಮಾಣಕ್ಕೆ ಯತ್ನಿಸಬೇಕೆಂಬ ಮನಸ್ಸುಗಳು ಹೆಚ್ಚಬೇಕಾಗಿದೆ ಎಂದು ವಿಧಾನಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಇಲ್ಲಿನ ಶ್ರೀನಿವಾಸ ಗಾರ್ಡನ್ಸ್‌ನಲ್ಲಿ ಗಂಗಮ್ಮ ಸೋಮಪ್ಪ ಬೊಮ್ಮಾಯಿ ಟ್ರಸ್ಟ್ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಹಾಗೂ ಸಾಮಾನ್ಯರ ಅಸಾಮಾನ್ಯ ಅಮ್ಮ ಗ್ರಂಥ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ ಕಳಕಳಿ ಕುಸಿಯುತ್ತಿರುವ ಇಂದಿನ ದಿನದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, ತಮ್ಮ ತಾಯಿ ಹೆಸರಿನ ಟ್ರಸ್ಟ್ ಅಡಿಯಲ್ಲಿ ಇಂತಹ ಹಲವು ಸಾಮಾಜಿಕ ಸೇವಾ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ತಾನು ಎಷ್ಟೆ ಕಳೆದುಕೊಂಡರೂ ಮಗುವಿಗೆ ಎಷ್ಟೆ ನೀಡುವ ತ್ಯಾಗಮಯಿ ಯಾರಾದರೂ ಇದ್ದರೆ ಅದು ತಾಯಿ ಮಾತ್ರ. ಏನೇ ಮಾಡಿದರೂ ತಾಯಿ ಋಣ ತೀರಿಸುವುದು ಸಾಧ್ಯವಿಲ್ಲ, ತಾಯಿ ಮಡಿಲು ದೊಡ್ಡ ನ್ಯಾಯಾಲಯ ಇದ್ದಂತೆ ಎಂದು ನುಡಿದರು.

ಇಂತಹ ಉತ್ತಮ ಕಾರ್ಯಕ್ರಮಗಳಿಗೆ ಪಾಲಕರು ತಮ್ಮ ಮಕ್ಕಳನ್ನು ಕರೆತರಬೇಕು ಅವರಿಗೆ ತಾಯಿ ಮಹತ್ವ ಏನೆಂಬುದು ಅರಿವಿಗೆ ಬರುತ್ತದೆ. ಮಕ್ಕಳನ್ನು ವಸತಿ ಶಾಲೆಗೆ ಹಾಕಿದರೆ ತಂದೆ–ತಾಯಿಯ ಕಷ್ಟ ಅವರಿಗೆ ತಿಳಿಯದಾಗುತ್ತದೆ. ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡದಿದ್ದರೆ ಮುಂದೆ ಅವರೇ ನಿಮ್ಮನ್ನು ವೃದ್ಧಾಶ್ರಮಗಳಿಗೆ ಕಳುಹಿಸುತ್ತಾರೆ ಎಂಬುದನ್ನು ಮರೆಯುವುದು ಬೇಡ. ನನ್ನ ತಾಯಿ ಹಾಲು–ಮೊಸರು ಮಾರಾಟ ಮಾಡಿ ನನ್ನ ಕಾಲೇಜು ಕಲಿಕೆಗೆ ಹಣ ನೀಡುತ್ತಿದ್ದರು ಎಂದು ತಮ್ಮ ತಾಯಿ ಮಮತೆಯನ್ನು ಸ್ಮರಿಸಿಕೊಂಡರು.

ಎಸ್.ಆರ್.ಬೊಮ್ಮಾಯಿ ಅವರೊಂದಿಗೆ ಕಾರ್ಯನಿರ್ವಹಿಸಿದ್ದೇನೆ. ಕೋರ್ಟ್‌ನ ತೀರ್ಪೊಂದರಲ್ಲಿ ಅವರ ಹೆಸರು ಚಿರಸ್ಥಾಯಿಯಾಗಿ ಉಳಿದಿದೆ. ಅವರು ಮುತ್ಸದ್ದಿ ನಾಯಕರು ಆಗಿದ್ದರು. ಅವರ ಪುತ್ರ ಬಸವರಾಜ ಬೊಮ್ಮಾಯಿ ಅವರು ತಮ್ಮ ತಾಯಿ ಹೆಸರಲ್ಲಿ ಟ್ರಸ್ಟ್ ಮಾಡಿ ಪುಸ್ತಕಗಳನ್ನು ಹೊರತರುವುದು ಸೇರಿದಂತೆ ಹಲವು ಯೋಜನೆ ಹಮ್ಮಿಕೊಂಡಿದ್ದಾರೆ. ನಾನು ಸಹ ನನ್ನ ತಾಯಿ ಸ್ಮರಣೆಗೆ ಅಮ್ಮ ಸೇವಾ ಟ್ರಸ್ಟ್ ಮಾಡಿದ್ದೇನೆ ಆದರೆ, ಪುಸ್ತಕಗಳನ್ನು ಹೊರತಂದಿಲ್ಲ, ಇಲ್ಲಿನ ಪ್ರೇರಣೆಯಿಂದ ತಾಯಿ ಕುರಿತಾಗಿ ಅಮ್ಮ ಸೇವಾ ಟ್ರಸ್ಟ್‌ನಿಂದ ಪುಸ್ತಕಗಳನ್ನು ಹೊರತರುವುದಾಗಿ ಹೇಳಿದರು.

ತಾಯಿ ಸಂಬಂಧ ದೇವರಿಗಿಂತ ಮಿಗಿಲು ಮಾಜಿ ಮುಖ್ಯಮಂತ್ರಿ, ಬಸವರಾಜ ಬೊಮ್ಮಾಯಿ ಪ್ರಾಸ್ತಾವಿಕವಾಗಿ ಮಾತನಾಡಿ, ಇದೊಂದು ಭಾವನಾತ್ಮಕ ಸಮಾರಂಭವಾಗಿದೆ. ವ್ಯಕ್ತಿ ಜನ್ಮಪೂರ್ವದ ಸಂಬಂಧವನ್ನು ತಾಯಿಯಿಂದ ಹೊಂದಲು ಮಾತ್ರ ಸಾಧ್ಯ. ತಾಯಿ ಸಂಬಂಧ ದೇವರಿಗಿಂತಲೂ ಮಿಗಿಲಾಗಿದೆ. ತಾಯಿ ಅಂತಃಕರಣಕ್ಕೆ ಬೆಲೆ ಕಟ್ಟಲಾಗದು ತಾಯಿತನ ನಿರಂತರ ಹಾಗೂ ಶಾಶ್ವತವಾಗಿದೆ. ನನ್ನ ತಾಯಿ ಗಂಗಮ್ಮ ಅವರು ಆಧ್ಯಾತ್ಮಿಕವಾಗಿ ಆಳವಾದ ಚಿಂತನೆ ಹೊಂದಿದವರಾಗಿದ್ದರಲ್ಲದೆ, ಅವರೊಬ್ಬ ದೊಡ್ಡ ದೇಶಭಕ್ತೆಯಾಗಿದ್ದರು.

ವಿಧಾನಸಭೆ ಸದಸ್ಯರಾದ ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ, ವಿಧಾನಪರಿಷತ್ತು ಸದಸ್ಯ ಎಸ್.ವಿ.ಸಂಕನೂರು ಟ್ರಸ್ಟ್ ಉಪಾಧ್ಯಕ್ಷ ಮಲ್ಲಿಕಾರ್ಜುನ ಬೊಮ್ಮಾಯಿ, ಚಂದ್ರಶೇಖರ ಪಟ್ಟದ ಇನ್ನಿತರರು ಇದ್ದರು.